# ಕನ್ನಡ ಪೋಸ್ಟ್

ಇದು ಸುದ್ದಿ ವಿಳಾಸ

ಸಂಪಾದಕ : ಮಂಜು ಬನವಾಸೆ

KANNADA POST

ಕನ್ನಡ ದಿನ ಪತ್ರಿಕೆ Kannada Daily

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.01 | Issue. 240 | Pages. 2 | Date: 05-08-2025, TUESDAY | RNI NO: KARKAN/2024/89601

ಸಂಪುಟ : 01 - ಸಂಚಿಕೆ : 240 - ಪುಟಗಳು : 2 05-08-2025 ಮಂಗಳವಾರ | Ph: 8762954248 | ದರ : ₹1


# ತಂತ್ರಜ್ಞಾನ ರಾಷ್ಟ್ರ ಅಭಿವೃದ್ಧಿಗೆ ಬಳಕೆಯಾಗಲಿ

## ಮೊಬೈಲ್ ಗೀಳು ಭವಿಷ್ಯ ಹಾಳು ಮಾಡದಿರಲಿ | ಜಿಲ್ಲಾ ನ್ಯಾಯಾಧೀಶರ ಸಲಹೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಆಧುನಿಕ ತಂತ್ರಜ್ಞಾನದ ನೆರವಿನಿಂದ ರಾಷ್ಟ್ರದ ಅಭಿವೃದ್ಧಿಯಾಗಬೇಕು ಎಂಬ ಅರಿವು ವಿದ್ಯಾರ್ಥಿಗಳಿಗೆ ಬರಬೇಕು. ಬಹುತೇಕರು ಸಮಯ ಕಳೆಯಲು ಸಾಮಾಜಿಕ ಜಾಲತಾಣಗಳ ಬಳಸುತ್ತಿದ್ದಾರೆ ಎಂದು ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶರಾದ ಹೇಮಲತಾ ಹೇಳಿದರು.

ನಗರದ ಎ.ವಿ. ಕಾಂತಮ್ಮ ಮಹಿಳಾ ಕಾಲೇಜಿನಲ್ಲಿ ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಕ್ಕಳ ಹಕ್ಕುಗಳ ರಕ್ಷಣಾಲಯ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಿಂದ ಹಮ್ಮಿಕೊಂಡಿದ್ದ ಬಾಲ್ಯ ವಿವಾಹ ನಿಷೇಧ, ಪೋಕ್ಸೋ ಕಾಯ್ದೆಗಳ ಸಂರಕ್ಷಣೆ ಅರಿವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ದೇಶದ ಅಭಿವೃದ್ಧಿಗಾಗಿ ಯೋಚಿಸಬೇಕಿದ್ದ ಯುವ ಜನಾಂಗ ಸಾಮಾಜಿಕ ಜಾಲತಾಣಗಳ ದುರ್ಬಳಕೆಯಿಂದ ಹೊರೆಯಾಗುತ್ತಿದ್ದಾರೆ. ವ್ಯಾಸಂಗದ ಅವಧಿಯನ್ನು ಬೇಡದ ವಿಚಾರಕ್ಕೆ ವಿನಿಯೋಗಿಸುತ್ತಿದ್ದಾರೆ. ಮಕ್ಕಳು ಮೊಬೈಲ್ ಗೀಳಿಗೆ ಬಲಿಯಾಗದೇ ಉದ್ದೇಶವನ್ನರಿತು ಗುರಿ ಸಾಧನೆಗೆ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು.

ಭಾರತ ಅತಿಹೆಚ್ಚು ಮಾನವ ಸಂಪನ್ಮೂಲ ಹೊಂದಿದೆ. ಶೇ. 40ರಷ್ಟು ಮಹಿಳೆಯರಿದ್ದಾರೆ. ಉತ್ತಮ ಶಿಕ್ಷಣ, ಕೌಶಲ ಸಂಪಾದಿಸಿದರೆ ದೇಶ ಮತ್ತು ಸಮಾಜಕ್ಕೆ ಅಮುಲ್ಯ ಕೊಡುಗೆಗಳಾಗಬಹುದು. ಆದರೆ ಮೊಬೈಲ್‌ನಲ್ಲೇ ಮುಳುಗಿ ಸಮಯವನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ. ಸಾಮಾಜಿಕ ಜಾಲತಾಣಗಳ ಬಳಕೆಯಿಂದ ಸಮಸ್ಯೆ ತಂದುಕೊಳ್ಳುತ್ತಿದ್ದಾರೆ ಎಂದು ತಿಳಿಸಿದರು.

ಮಕ್ಕಳು ಅಮೂಲ್ಯ ಆಸ್ತಿ. ಸಮಾಜ, ಕುಟುಂಬ ಹಾಗೂ ದೇಶ ಉತ್ತಮ ಅವಕಾಶ ಕಲ್ಪಿಸಿದೆ. ಎಲ್ಲರಿಗೂ ಪೌಷ್ಟಿಕ ಆಹಾರ, ಓದಲು ಉಚಿತ ಸಲಕರಣೆ ಮತ್ತು ಪೂರಕ ವಾತಾವರಣ ಸೃಷ್ಟಿಯಾಗಿದೆ. ಅದನ್ನು ಬಳಸಿಕೊಂಡು ಜೀವನದಲ್ಲಿ ಒಳ್ಳೆಯ ಕೆಲಸ ಮಾಡಬೇಕು. ನಿರಂತರ ಅಧ್ಯಯನ, ಪರಿಶ್ರಮ ಹಾಗು ತಾಳ್ಮೆಯಿಂದ ದೊಡ್ಡ ಗುರಿ ಸಾಧಿಸಬೇಕು ಎಂದು ಹೇಳಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಬಿ.ಕೆ. ದಾಕ್ಷಾಯಣಿ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಹಾಸನ ಜಿಲ್ಲೆಯಲ್ಲಿಯೂ ಬಾಲ್ಯ ವಿವಾಹ ಮತ್ತು ಪೋಕ್ಸೋ ಪ್ರಕರಣಗಳು ಹೆಚ್ಚಾಗುತ್ತಿವೆ. ಹದಿಹರೆಯದ ಮಕ್ಕಳು ವಯೋಸಹಜ ಆಕರ್ಷಣೆಗೆ ಒಳಗಾಗುತ್ತಾರೆ. ಸಣ್ಣ ವಯಸ್ಸಿನಲ್ಲಿ ಮನೆ ಬಿಟ್ಟು ಓಡಿಹೋಗುವುದು, ಬಾಲ್ಯವಿವಾಹಕ್ಕೆ ಒಳಾಗಾಗುವುದು, ತದ ನಂತರ ಲೈಂಗಿಕ ದೌರ್ಜನ್ಯಗಳಿಗೆ ಒಳಗಾಗುತ್ತಾರೆ ಎಂದರು.

> ಸಾಮಾಜಿಕ ಜಾಲತಾಣಗಳ ಬಳಕೆ ಮಾಡುವಾಗ ಎಚ್ಚರ ಇರಬೇಕು. ತಂತ್ರಜ್ಞಾನದ ಸಾಧಕ ಬಾಧಕಗಳ ಕುರಿತು ಅಧ್ಯಯನ ನಡೆಸಬೇಕು. ಮಕ್ಕಳು ದೇಶದ ಆಸ್ತಿಯಾಗಿದ್ದು ಅವರನ್ನು ಸರಿಯಾದ ದಾರಿಯಲ್ಲಿ ಕರೆದೊಯ್ಯುವ ಜವಾಬ್ದಾರಿ ಪೋಷಕರು ಹಾಗೂ ಶಿಕ್ಷಕರದ್ದಾಗಿದೆ.
>
> **– ಹೇಮಲತಾ, ಜಿಲ್ಲಾ ನ್ಯಾಯಾಧೀಶರು**

ಚಿಕ್ಕ ವಯಸ್ಸಿನಲ್ಲಿ ಲೈಂಗಿಕ ದೌರ್ಜನ್ಯಗಳಿಗೆ ಒಳಗಾಗಿ ಜೀವನ ಹಾಳು ಮಾಡಿಕೊಳ್ಳಬಾರದು. ಜೀವನದಲ್ಲಿ ಉತ್ತಮ ಆಲೋಚನೆ, ನಡವಳಿಕೆ ಬೆಳೆಸಿಕೊಳ್ಳಿ ಉತ್ತಮ ಪ್ರಜೆಗಳಾಗಿ ಎಂದು ಕಿವಿಮಾತು ಹೇಳಿದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಕೆ.ಜಿ. ದಿಲೀಪ್ ಮಾತನಾಡಿ, ಜಿಲ್ಲೆಯಲ್ಲಿ ಕಂಡುಬರುವ ಅನಾಥ, ಪರಿತ್ಯಕ್ತ, ಸಂಕಷ್ಟ ಹಾಗೂ ಹಿಂಸೆ ದೌರ್ಜನ್ಯಗಳಿಗೆ ಒಳಗಾಗಿ ಬರುವ ಮಕ್ಕಳಿಗೆ ರಕ್ಷಣೆ, ಆಪ್ತ ಸಮಾಲೋಚನೆ, ಶಿಕ್ಷಣ ಹಾಗು ವಸತಿಯುಕ್ತ ಪುನರ್ ವಸತಿ ಕಲ್ಪಿಸಲು ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಶ್ರಮಿಸುತ್ತಿದೆ. ಯಾವುದೇ ಸಂಕಷ್ಟ ಪರಿಸ್ಥಿತಿಯಲ್ಲಿನ ಮಕ್ಕಳು ಕಂಡುಬಂದರೆ ಸಹಾಯವಾಣಿ 1098ಗೆ ಕರೆ ಮಾಡಿ ಸಹಾಯ ಪಡೆಯಬಹುದು ಎಂದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಕಾಂತರಾಜು ಅವರು, ಬಾಲ್ಯವಿವಾಹಕ್ಕೆ ಕಾರಣ, ಪರಿಣಾಮ ಹಾಗೂ ಕಾನೂನು ಅರಿವು ಮೂಡಿಸಿದರು. ಉಪನ್ಯಾಸಕರಾದ ಮುರುಳಿ, ಸುನೀಲ್ ಇತರರು ಉಪಸ್ಥಿತರಿದ್ದರು.

# ಮಂಜರಾಬಾದ್ ಕೋಟೆಗೆ ಶಾಸಕ ಸಿಮೆಂಟ್ ಮಂಜು ಭೇಟಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ನಿರಂತರ ಮಳೆಯಿಂದ ಕುಸಿತ ಕಂಡಿರುವ ಪಟ್ಟಣ ಸಮೀಪದ ಮಂಜರಾಬಾದ್ ಕೋಟೆಗೆ ಸೋಮವಾರ ಶಾಸಕ ಸಿಮೆಂಟ್ ಮಂಜು ಭೇಟಿ ನೀಡಿ ಪರಿಶೀಲಿಸಿದರು.

ಈ ವೇಳೆ ಮಾತನಾಡಿದ ಅವರು, ಪ್ರವಾಸಿಗರ ನೆಚ್ಚಿನ ತಾಣವಾಗಿರುವ ಮಂಜರಾಬಾದ್ ಕೋಟೆಯ ಸಮಗ್ರ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಐತಿಹಾಸಿಕ ಮಂಜರಾಬಾದ್ ಕೋಟೆಗೆ ನಿತ್ಯ ಸಾವಿರಾರು ಪ್ರವಾಸಿಗರು ಬರುತ್ತಾರೆ. ಐತಿಹಾಸಿಕ ಸ್ಮಾರಕಗಳನ್ನು ರಕ್ಷಿಸುವುದು ನಮ್ಮ ಕರ್ತವ್ಯ. ಕೋಟೆಗೆ ಯಾವ ಧಕ್ಕೆಯಾಗದಂತೆ ದುರಸ್ತಿ ಮಾಡುವಂತೆ ಪುರಾತತ್ವ ಇಲಾಖೆ ಅಧಿಕಾರಿಗಳಿಗೆ ಸೂಚಿಸಲಾಗುವುದು. ಪ್ರವಾಸೋದ್ಯಮ ಇಲಾಖೆಗೆ ಹೆಚ್ಚಿನ ಅನುದಾನ ಮಂಜೂರಾಗದ ಕಾರಣ ತಾಲ್ಲೂಕಿನ ಪ್ರೇಕ್ಷಣೀಯ ಸ್ಥಳಗಳು ಅಭಿವೃದ್ಧಿ ಕಾಣಲು ಸಾಧ್ಯವಾಗುತ್ತಿಲ್ಲ ಎಂದರು.

# ಕೊಣನೂರು ಸೇತುವೆ ವೀಕ್ಷಣೆಗೆ ಪ್ರವಾಸಿಗರ ದಂಡು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಅರಕಲಗೂಡು: ತಾಲ್ಲೂಕಿನ ಕೊಣನೂರಿನಲ್ಲಿ ಕಾವೇರಿ ನದಿಗೆ ಅಡ್ಡಲಾಗಿ ನಿರ್ಮಿಸಿರುವ ಸೇತುವೆ ವೀಕ್ಷಣೆಗೆ ಪ್ರವಾಸಿಗರು ಹೆಚ್ಚಿನ ಸಂಖ್ಯೆಯಲ್ಲಿ ಬರುತ್ತಿದ್ದು ಅಪಾಯಕ್ಕೆ ಆಹ್ವಾನ ಮಾಡಿಕೊಂಡಂತಾಗಿದೆ.

ಕಳೆದ 30 ವರ್ಷಗಳ ಹಿಂದೆ ಜಿಲ್ಲಾ ಪಂಚಾಯಿತಿ ಅನುದಾನದಲ್ಲಿ ಸೇತುವೆ ನಿರ್ಮಿಸಲಾಗಿದೆ. ಕಟ್ಟೆಪುರ, ಮಾದಾಪುರ ಸೇರಿ ವಿವಿಧ ಗ್ರಾಮಗಳ ಸಂಪರ್ಕಕ್ಕೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ನಿರ್ಮಾಣವಾಗಿರುವ ಸೇತುವೆ ಜನರಿಗೆ ಸಂಪರ್ಕ ಒದಗಿಸುತ್ತಿರುವುದು ಮಾತ್ರವಲ್ಲದೆ ಪ್ರವಾಸಿಗರ ಅಚ್ಚುಮೆಚ್ಚಿನ ತಾಣವಾಗಿದೆ.

ಆದರೆ ಈ ತೂಗು ಸೇತುವೆ ಅವನತಿ ಅಂಚಿನಲ್ಲಿದ್ದು ಇಲ್ಲಿಯವರೆಗೆ ಅದರ ನಿರ್ವಹಣೆ, ದುರಸ್ತಿ ಕಾರ್ಯ ಆಗಿಲ್ಲ. ಕಬ್ಬಿಣದಲ್ಲಿ ನಿರ್ಮಿಸಿರುವ ತೂಗು ಸೇತುವೆಯು ಮಳೆ ಬಿಸಿಲಿಗೆ ತುಕ್ಕು ಹಿಡಿದಿದೆ. ಜನರು ಸಂಚರಿಸುವ ಭಾಗದಲ್ಲಿ ಸಾಕಷ್ಟು ಕಡೆ ಮುರಿದಿದೆ. 10ಕ್ಕಿಂತ ಹೆಚ್ಚು ಜನರು ಹೆಜ್ಜೆ ಇಟ್ಟರೆ ಸೇತುವೆ ಕುಸಿಯುವ ಅನುಭವವಾಗುತ್ತದೆ. ಆದರೂ ಪ್ರವಾಸಿಗರು ಪ್ರಾಣ ಭೀತಿಯಿಲ್ಲದೆ ಕಾವೇರಿ ನದಿ ಸೊಬಗು ವೀಕ್ಷಣೆಗೆ ಹೆಚ್ಚಿನ ಸಂಖ್ಯೆಯಲ್ಲಿ ಬರುತ್ತಿದ್ದಾರೆ.

ಕಟ್ಟೆಪುರ, ಮಾದಾಪುರ ಗ್ರಾಮದ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಸೇತುವೆ ಆಧಾರವಾಗಿದೆ. ಫ್ರಿ ವೆಡ್ಡಿಂಗ್ ಶೂಟ್‌ಗೆ ಜನರು ಬರುತ್ತಿದ್ದಾರೆ. ಪ್ರವಾಸಿಗರ ಆಗಮನದಿಂದ ಸ್ಥಳೀಯ ವ್ಯಾಪಾರಿಗಳಿಗೆ ಅನುಕೂಲವಾಗುತ್ತಿದೆಯಾದರೂ ಭಾರೀ ಅನಾಹುತ ಸಂಭವಿಸದಂತೆ ಎಚ್ಚರ ವಹಿಸಬೇಕು. ಇತ್ತೀಚೆಗಷ್ಟೇ ಸಂಸದ ಶ್ರೇಯಸ್ ಪಟೇಲ್ ಅವರು ಸ್ಥಳಕ್ಕೆ ಭೇಟಿ ನೀಡಿ ಸುರಕ್ಷತಾ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಸೇತುವೆ ವೀಕ್ಷಣೆಗೆ ನಿತ್ಯ ಪ್ರವಾಸಿಗರು ಬರುತ್ತಲೇ ಇದ್ದು ದೊಡ್ಡ ಪ್ರಮಾದ ಘಟಿಸುವ ಮುನ್ನ ಸಾರ್ವಜನಿಕರ ನಿರ್ಬಂಧ ಅಥವಾ ದುರಸ್ತಿ ಕಾರ್ಯ ಕೈಗೊಳ್ಳಬೇಕಿದೆ.

# ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಆರಂಭಕ್ಕೆ ಆಗ್ರಹಿಸಿ ಸತ್ಯಾಗ್ರಹ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ನಗರದ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಆರಂಭಕ್ಕೆ ಆಗ್ರಹಿಸಿ ಆ. 15 ರಿಂದ ಸಾಮೂಹಿಕ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗಿದೆ ಎಂದು ಸಿಐಟಿಯು ಜಿಲ್ಲಾಧ್ಯಕ್ಷ ಧರ್ಮೇಶ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿ, ನಗರದ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಕಟ್ಟದ ಮುಂದೆ ಸತ್ಯಾಗ್ರಹ ನಡೆಸಲಾಗುವುದು. ಆ.14 ರಂದು ಜಿಲ್ಲೆಯ ಜನರ ಪರವಾಗಿ ಜನಾರೋಗ್ಯದ ಹಕ್ಕೊತ್ತಾಯಗಳನ್ನು ಜಿಲ್ಲಾಧಿಕಾರಿಗೆ ಸಲ್ಲಿಸಲಾಗುವುದು. ಆ.15 ರಂದು ನಡೆಯುವ ಜನಾರೋಗ್ಯದ ಸ್ವಾತಂತ್ರ್ಯಕ್ಕಾಗಿ ಸಾಮೂಹಿಕ ಧರಣಿ ಸತ್ಯಾಗ್ರಹ ನಡೆಸಲಾಗುವುದು. ಜನಾರೋಗ್ಯದ ಪರಿಸ್ಥಿತಿ ತೀವ್ರವಾಗಿ ಉಲ್ಬಣಗೊಂಡಿದೆ. ಎಲ್ಲಾ ವಯಸ್ಸಿನವರಲ್ಲಿ ಹೃದಯಾಘಾತ, ಹೃದಯ ಸ್ತಂಭನ ಮತ್ತು ಹಠಾತ್ ಮರಣಗಳ ಸಂಖ್ಯೆ ಹೆಚ್ಚಾಗುತ್ತಿದೆ. ಹೀಗಾಗಿ ಹಿಮ್ಸ್ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ತುರ್ತು ಕಾಮಗಾರಿ, ವೈದ್ಯಕೀಯ ಯಂತ್ರೋಪಕರಣ, ತಜ್ಞ ವೈದ್ಯರು, ವೈದ್ಯಕೀಯ ಮತ್ತು ವೈದ್ಯಕೀಯೇತರ ಸಿಬ್ಬಂದಿಗಳ ನೇಮಕಾತಿಗಾಗಿ ಸದ್ಯದ ಅಂದಾಜಿನ ಪ್ರಕಾರ ಕನಿಷ್ಠ 60 ಕೋಟಿ ರೂ.ಅನುದಾನದ ಅಗತ್ಯವಿದೆ ಎಂದರು.

ಹೃದ್ರೋಗ ಶಸ್ತ್ರಚಿಕಿತ್ಸೆ, ನರರೋಗ, ಮೂತ್ರಪಿಂಡ, ಗ್ಯಾಸ್ಟ್ರೋ ಎಂಟಾಲಜಿ, ಕ್ಯಾನ್ಸರ್, ಪ್ಲಾಸ್ಟಿಕ್ ಸರ್ಜರಿ ಸೇರಿದಂತೆ ಮಾರಣಾಂತಿಕ ರೋಗ ತಪಾಸಣೆ ಹತ್ತು ವಿಶೇಷ ವಿಭಾಗಗಳ ಗಂಭೀರ ಸ್ವರೂಪದ ಆರೋಗ್ಯದ ಸಮಸ್ಯೆಗಳಿಗೆ ಚಿಕಿತ್ಸೆ ಒದಗಿಸಲು ಇಲ್ಲಿ ಸಾಧ್ಯತೆ ಇದೆ. ರೋಗ ತಪಾಸಣೆ ಮತ್ತು ಚಿಕಿತ್ಸೆ ನೀಡಲು ವೈದ್ಯಕೀಯ ವಿಭಾಗಗಳು, ಕ್ಯಾಥ್‌ಲ್ಯಾಬ್, ಅತ್ಯಂತ ಸುಸಜ್ಜಿತವಾದ ಅತ್ಯುತ್ತಮ ಗುಣಮಟ್ಟದ ವೈದ್ಯಕೀಯ ಸೌಲಭ್ಯಗಳಿರುವ ಪ್ರತ್ಯೇಕ ಶಸ್ತ್ರಚಿಕಿತ್ಸಾ ಘಟಕಗಳನ್ನು ಕೂಡಲೇ ಪ್ರಾರಂಭಿಸಬೇಕು. ನುರಿತ ತಜ್ಞ ವೈದ್ಯರು, ವೈದ್ಯರು, ವೈದ್ಯಕೀಯ ಮತ್ತು ವೈದ್ಯಕೀಯೇತರ ಸಿಬ್ಬಂದಿಗಳನ್ನು ನೇಮಕ ಮಾಡಿ, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಕಾರ್ಯಾರಂಭಕ್ಕೆ ಅಗತ್ಯ ಅನುಕೂಲಗಳನ್ನು ತುರ್ತಾಗಿ ಒದಗಿಸಿ, ಕೂಡಲೇ ಸರ್ಕಾರವು ಅಗತ್ಯವಿರುವ ಅನುದಾನ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಸಾಹಿತಿ ರೂಪ ಹಾಸನ, ದಲಿತ ಮುಖಂಡ ಎಚ್.ಕೆ. ಸಂದೇಶ್, ಎಂ.ಜಿ.ಪೃಥ್ವಿ ಇತರರಿದ್ದರು.

# ಆ. 9-10ರಂದು ವೀರಶೈವ ಪದಾಧಿಕಾರಿಗಳ ಕಾರ್ಯಾಗಾರ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಅರಕಲಗೂಡಿನ ದೊಡ್ಡ ಮಠದಲ್ಲಿ ಆ. 9 ಮತ್ತು 10 ರಂದು ವೀರಶೈವ ಲಿಂಗಾಯತ ಮಹಾಸಭಾ ಮೈಸೂರು ವಿಭಾಗ ಮಟ್ಟದ ಪದಾಧಿಕಾರಿಗಳ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ ಎಂದು ಮಠದ ಶ್ರೀ ಮಲ್ಲಿಕಾರ್ಜುನ ಸ್ವಾಮೀಜಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿ, ಆ. 9ರ ಬೆಳಿಗ್ಗೆ 8 ಗಂಟೆಗೆ ಧ್ವಜಾರೋಹಣ ನೆರವೇರಿಸಲಾಗುವುದು. ತಣ್ಣೀರುಹಳ್ಳ ಮಠದ ಶ್ರೀ ವಿಜಯಕುಮಾರ ಸ್ವಾಮೀಜಿ, ಆಲೂರು ತಾಲ್ಲೂಕು ಕಾರ್ಜುವಳ್ಳಿ ಹಿರೇಮಠದ ಶ್ರೀ ಸದಾಶಿವ ಸ್ವಾಮೀಜಿ, ಬಾಳೆಹೊಸೂರು ಶಿರಹಟ್ಟಿ ಭಾವೈಕ್ಯತಾ ಮಹಾಸಂಸ್ಥಾನದ ಫಕೀರ ದಿಂಗಾಲೇಶ್ವರ ಸ್ವಾಮೀಜಿ, ಹಳೇಬೀಡು ಪುಷ್ಪಗಿರಿ ಮಠದ ಶ್ರೀ ಸೋಮಶೇಖರ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಕಾರ್ಯಾಗಾರದ ಉದ್ಘಾಟನೆಯನ್ನು ಅರಣ್ಯ ಸಚಿವ ಈಶ್ವರ್ ಖಂಡ್ರೆ, ನೆರವೇರಿಸುವರು. ಆಶಯ ನುಡಿಯನ್ನು ಅಖಿಲ ಭಾರತ ವೀರಶೈವ ಲಿಂಗಾಯತ ಮಂಡಳಿ ರಾಜ್ಯ ಘಟಕದ ಪ್ರಧಾನ ಕಾರ್ಯದರ್ಶಿ ನಟರಾಜ ಸಾಗರನಹಳ್ಳಿ ಆಡುವರು. ಅಧ್ಯಕ್ಷತೆಯನ್ನು ಅಖಿಲ ಭಾರತ ವೀರಶೈವ ಲಿಂಗಾಯತ ಮಂಡಳಿ ಜಿಲ್ಲಾಧ್ಯಕ್ಷ ಪರಮೇಶ್ ನವಿಲೆ ವಹಿಸಲಿದ್ದಾರೆಂದರು.

ಆ. 10ರ ಭಾನುವಾರ ಅಧಿವೇಶನ ಜರುಗಲಿದೆ. ಕಾರ್ಯಾಗಾರದ ಸಮಾರೋಪ ಸಮಾರಂಭವು ಮಧ್ಯಾಹ್ನ 3.30ಕ್ಕೆ ನಡೆಯಲಿದೆ ಎಂದು ಹೇಳಿದರು.

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷ ಪರಮೇಶ್ ನವಿಲೆ, ರವಿಕುಮಾರ್, ಯತೀಶ್, ಸುರೇಶ್, ಕಟ್ಟಾಯ ಶಿವಕುಮಾರ್ ಇದ್ದರು.

# ಸರ್ಫೆಸಿ ಕಾಯ್ದೆಯಿಂದ ಕಾಫಿ ಬೆಳೆ ಹೊರಗಿಡಿ: ಸಂಸದರ ಮನವಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಸೋಮವಾರ ನವದೆಹಲಿಯಲ್ಲಿ ಸಂಸದ ಶ್ರೇಯಸ್ ಪಟೇಲ್ ಭೇಟಿಯಾಗಿ ಸರ್ಫೆಸಿ ಕಾಯ್ದೆಯಿಂದ ಕಾಫಿ ಬೆಳೆಗಾರರನ್ನು ಹೊರಗಿಡುವಂತೆ ಮನವಿ ಸಲ್ಲಿಸಿದರು.

ಕಾಫಿ ಬೆಳೆಯನ್ನು ಕೃಷಿ ಚಟುವಟಿಕೆಯೆಂದು ಸುದೀರ್ಘ ಕಾಲದಿಂದ ಗುರುತಿಸಲಾಗಿದೆ. ಈ ವಿಚಾರವನ್ನು ಮನಗಂಡು, ಕಾಫಿ ಬೆಳೆಗಾರರು ಕಿಸಾನ್ ಕ್ರೆಡಿಟ್ ಕಾರ್ಡ್ ಹಾಗೂ ಇತರ ಕೃಷಿ ಸಾಲ ಯೋಜನೆಗಳ ಅಡಿಯಲ್ಲಿ ಸಾಲ ಪಡೆಯುತ್ತಿದ್ದಾರೆ. ಇಂತಹ ಸಾಲಗಳನ್ನು ಸದಾ ಟಿಅಗ್ರಿಕಲ್ಚರ್ ಪ್ರಯಾರಿಟಿ ಸೆಕ್ಟರ್ ಲೆಂಡಿಂಗ್‌ಟಿ ಅಡಿಯಲ್ಲಿ ವಿಂಗಡಿಸಲಾಗಿದೆ. ಆದರೆ ಇತ್ತೀಚಿನ ಕೆಲ ವರ್ಷಗಳಿಂದ ಕೆಲ ಬ್ಯಾಂಕುಗಳು ಈ ಸಾಲಗಳನ್ನು ಸರ್ಫೆಸಿ ಕಾಯ್ದೆ 2002ರ ಅಡಿಯಲ್ಲಿ ವಸೂಲಾತಿಗೆ ತೆಗೆದುಕೊಳ್ಳುತ್ತಿವೆ.

ಅನಿಶ್ಚಿತ ಹವಾಮಾನದಿಂದ ಉಂಟಾಗುತ್ತಿರುವ ಬೆಳೆ ನಷ್ಟ ಮತ್ತು ಜಾಗತಿಕ ಮಾರುಕಟ್ಟೆಯಲ್ಲಿ ಬೆಲೆ ಕುಸಿತದ ಹಿನ್ನೆಲೆಯಲ್ಲಿ ಈ ರೀತಿಯ ಕ್ರಮಗಳು ಸಣ್ಣ ಹಾಗೂ ಮಧ್ಯಮ ಪ್ರಮಾಣದ ಬೆಳೆಗಾರರನ್ನು ಸಂಕಷ್ಟಕ್ಕೆ ಸಿಲುಕಿಸುತ್ತದೆ ಎಂದರು.

ಆದ್ದರಿಂದ ಬ್ಯಾಂಕುಗಳು ಹಾಗೂ ಹಣಕಾಸು ಸಂಸ್ಥೆಗಳಿಗೆ ಕಾಫಿ ಸಾಲಗಳನ್ನು ಕೃಷಿ ಸಾಲಗಳೆಂದು ಪರಿಗಣಿಸಿ ಕಾಯ್ದೆಯ ಕಾನೂನು ಕ್ರಮದಿಂದ ದೂರವಿಟ್ಟು ಬೆಳೆಗಾರರಿಗೆ ನೆರವಾಗಬೇಕೆಂದು ಕೋರಿದರು.

# ಸಾರಿಗೆ ನೌಕರರ ಹೆದರಿಸುವ ಕೆಲಸ ಬಿಡಿ



ಸಕಲೇಶಪುರ: ವೇತನ ಪರಿಷ್ಕರಣೆಗಾಗಿ ಮುಷ್ಕರಕ್ಕೆ ಮುಂದಾಗಿರುವ ಕೆಎಸ್‌ಆರ್‌ಟಿಸಿ ನೌಕರರನ್ನು ಹೆದರಿಸುವ ಕೆಲಸವನ್ನು ಸರ್ಕಾರ ಬಿಡಬೇಕು ಎಂದು ಶಾಸಕ ಸಿಮೆಂಟ್ ಮಂಜು ಆಗ್ರಹಿಸಿದರು.

ಸೋಮವಾರ ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಸರ್ಕಾರ ಕೆಎಸ್‌ಆರ್‌ಟಿಸಿ ನೌಕರರನ್ನು ಹೆದರಿಸುವ ತಂತ್ರ ಅನುಸರಿಸುತ್ತಿದೆ. ಆ ರೀತಿ ಮಾಡದೆ ಪ್ರೀತಿಯಿಂದ ಕಾಣಬೇಕು. ಸರ್ಕಾರ ಮುಷ್ಕರಕ್ಕೆ ಪರ್ಯಾಯವಾಗಿ ಖಾಸಗಿ ಬಸ್‌ಗಳಿಂದ ಸೇವೆ ಒದಗಿಸುವುದಾಗಿ ಹೇಳಿಕೊಂಡಿದೆ. ಆದರೆ ಅದು ಯಾವ ಕಾರಣಕ್ಕೂ ಯಶ ಕಾಣುವುದಿಲ್ಲ ಎಂದರು. ಸಾರಿಗೆ ನೌಕರರ ಕೆಲಸ ಕಷ್ಟದಾಯಕವಾಗಿದೆ. ಸರ್ಕಾರ ವೇತನ ಪರಿಷ್ಕರಣೆ ಮಾಡುವ ಮೂಲಕ ಲಕ್ಷಾಂತರ ಕುಟುಂಬಗಳಿಗೆ ನೆರವಾಗಬೇಕು. ಸಾರಿಗೆ ನೌಕರರ ಕಷ್ಟ ಬೇರೆಯವರಿಗಿಂತ ಭಿನ್ನವಾಗಿರುತ್ತದೆ. ನಮ್ಮ ತಂದೆ 30 ವರ್ಷ ಸಾರಿಗೆ ಇಲಾಖೆಯಲ್ಲಿ ಕೆಲಸ ಮಾಡಿದ್ದಾರೆ. ನೌಕರರು ಎದುರಿಸುವ ಕಷ್ಟ ಏನೆಂಬುದು ನನಗೆ ಚೆನ್ನಾಗಿ ಗೊತ್ತಿದೆ. ಬೇರೆ ರಾಜ್ಯಕ್ಕೆ ಹೋಲಿಸಿದರೆ ನಮ್ಮ ರಾಜ್ಯದ ಸಾರಿಗೆ ನೌಕರರು ಅತ್ಯಂತ ದಕ್ಷತೆಯಿಂದ ಕೆಲಸ ಮಾಡುತ್ತಾರೆಂದರು. ರಾಜ್ಯದಲ್ಲಿ ಶಕ್ತಿ ಯೋಜನೆ ಜಾರಿಯಾದ ಬಳಿಕ ಕೆಎಸ್‌ಆರ್‌ಟಿಸಿ ನೌಕರರಿಗೆ ಒತ್ತಡ ಹೆಚ್ಚಿದೆ. ಹಾಗಾಗಿ ಅವರ ಮನವಿಗೆ ಸರ್ಕಾರ ಸ್ಪಂದಿಸಬೇಕು. ಈಗ ಬರುತ್ತಿರುವ ವೇತನದಿಂದ ಕುಟುಂಬ ನಿರ್ವಹಣೆ ಅಸಾಧ್ಯ ಎಂದರು.


**ಅಕ್ಷಮಾಲ ಫುಡ್ ಅಂಡ್ ಬಿವರೇಜಸ್**

ಸಾಂಪ್ರದಾಯಿಕ ಆಹಾರೋತ್ಪನ್ನಗಳ ತಯಾರಕರು

ಬುಸ್ತೇನಹಳ್ಳಿ ಬಸ್ ನಿಲ್ದಾಣದ ಬಳಿ,
ಬೆಂಗಳೂರು-ಮಂಗಳೂರು ಬೈಪಾಸ್ ರಸ್ತೆ, ಹಾಸನ

**ಕಾರ್ಮಿಕರು ಬೇಕಾಗಿದ್ದಾರೆ**

ಸಾಂಪ್ರದಾಯಿಕ ಆಹಾರೋತ್ಪನ್ನ ತಯಾರಿಕಾ ಘಟಕದಲ್ಲಿ ಉತ್ಪನ್ನಗಳ ತಯಾರಿಕೆ ಕೆಲಸಕ್ಕೆ ಕಾರ್ಮಿಕರು (ಮಹಿಳೆಯರು, ಪುರುಷರು) ಬೇಕಾಗಿದ್ದಾರೆ.

**ಆಸಕ್ತರು ಸಂಪರ್ಕಿಸಿ:**

**ಮೊಸಂ: 6362640470**

ಕರೆ ಮಾಡಬೇಕಾದ ಸಮಯ: ಬೆಳಗ್ಗೆ 10-ಸಂಜೆ 5 ಗಂಟೆ


# ಸಕಲೇಶಪುರ: ಫಲಾನುಭವಿಗಳಿಗೆ ಮೋಟಾರ್ ಪಂಪ್ ವಿತರಣೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಸಕಲೇಶಪುರ: ಡಾ. ಬಿ.ಆರ್. ಅಂಬೇಡ್ಕರ್ ನಿಗಮದಿಂದ ಗಂಗಾ ಕಲ್ಯಾಣ ಯೋಜನೆಯಡಿ ಫಲಾನುಭವಿಗಳಿಗೆ ಶಾಸಕ ಸಿಮೆಂಟ್ ಮಂಜು ಮೋಟಾರ್, ಪಂಪ್ ವಿತರಣೆ ಮಾಡಿದರು.

ತಾಲ್ಲೂಕು ಪಂಚಾಯತಿ ಆವರಣದಲ್ಲಿ ಸೋಮವಾರ 8 ರೈತರಿಗೆ ಸಲಕರಣೆ ವಿತರಿಸಿ ಮಾತನಾಡಿ, ಕೃಷಿ ಚಟುವಟಿಕೆಗಾಗಿ ಗುಣಮಟ್ಟದ ಸಾಮಾಗ್ರಿಗಳನ್ನು ಇಲಾಖೆ ಒದಗಿಸಿದೆ. ಸಕಲೇಶಪುರ ಮಲೆನಾಡು ಪ್ರದೇಶವಾದರೂ ಕೆಲವೆಡೆ ನೀರಿನ ಕೊರತೆ ಇದೆ. ಹೀಗಾಗಿ ಪಂಪ್‌ಸೆಟ್‌ಗಳು ಅನಿವಾರ್ಯವಾಗಿದೆ. ಯೋಜನೆಯನ್ನು ಬಳಸಿಕೊಂಡು ಕೃಷಿ ಕಾರ್ಯವನ್ನು ಕೈಗೊಳ್ಳಬೇಕು.

ನೀರಾವರಿಗೆ ನೀರನ್ನು ಮಿತವಾಗಿ ಬಳಸಿಕೊಳ್ಳಬೇಕು. ಅದಕ್ಕಾಗಿ ಹನಿ ನೀರಾವರಿ, ಸಿಂಚನ ವ್ಯವಸ್ಥೆ ಸೇರಿ ಆಧುನಿಕ ವಿಧಾನ ಬಳಸಿಕೊಳ್ಳಬೇಕು. ಸರ್ಕಾರ ನೀಡಿದ ಪರಿಕರಗಳನ್ನು ಅನ್ಯರಿಗೆ ನೀಡದೆ ಫಲಾನುಭವಿಗಳೇ ಬಳಸಿಕೊಳ್ಳಬೇಕು ಎಂದರು.

ಪ್ರತಿಯೊಬ್ಬರಿಗೆ 7 ಹೆಚ್‌ಪಿ ಮೋಟಾರ್, ಪಂಪ್, 5 ಪ್ಯಾನಲ್ ಬೋರ್ಡ್ ಜೊತೆಗೆ 81 ಪೈಪ್‌ಗಳನ್ನು ವಿತರಣೆ ಮಾಡಲಾಗಿದೆ. ಈ ಎಲ್ಲಾ ಪರಿಕರಗಳು ಐಎಸ್‌ಐ ಮಾನ್ಯತೆಯನ್ನು ಪಡೆದಿದ್ದು, ಗುಣಮಟ್ಟ ಹೊಂದಿವೆ ಎಂದರು.

ಅಂಬೇಡ್ಕರ್ ಅಭಿವೃದ್ಧಿ ನಿಗಮದ ತಾಲ್ಲೂಕು ಅಭಿವೃದ್ಧಿ ಅಧಿಕಾರಿ ಶ್ರುತಿ, ಪ್ರಥಮ ದರ್ಜೆ ಸಹಾಯಕಾಧಿಕಾರಿ ಜಯಶಂಕರ್ ಉಪಸ್ಥಿತರಿದ್ದರು.

# ಅತಿವೃಷ್ಟಿಯಿಂದ ಅಪಾರ ನಷ್ಟ : ತಗ್ಗು ಪ್ರದೇಶಕ್ಕೆ ನೀರು

# ಪರಿಹಾರ ನಿರೀಕ್ಷೆಯಲ್ಲಿ ಅನ್ನದಾತರು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ತಾಲ್ಲೂಕಿನಲ್ಲಿ ಅತಿವೃಷ್ಟಿ ಹಾಗೂ ಕಾವೇರಿ ಪ್ರವಾಹ ಬಂದೆರಗಿದ ಪರಿಣಾಮ ತಂಬಾಕು, ಶುಂಠಿ, ಮುಸುಕಿನ ಜೋಳ ಮತ್ತು ಕಾಫಿ ಬೆಳೆಗೆ ಹಾನಿಯಾಗಿ ಅನ್ನದಾತರು ಆರ್ಥಿಕವಾಗಿ ನಷ್ಟ ಅನುಭವಿಸುವಂತಾಗಿದೆ.



ಈ ಬಾರಿ ಮುಂಗಾರು ಪೂರ್ವದಿಂದಲೂ ಸುರಿದ ಭಾರಿ ಮಳೆಯಿಂದಾಗಿ ತಂಬಾಕು ಬೆಳೆಗೆ ಹೆಚ್ಚು ಹಾನಿ ಉಂಟಾಗಿದೆ. ಇದೀಗ ಬಿದ್ದ ಮುಂಗಾರು ಮಳೆ ಅಬ್ಬರಕ್ಕೆ ಎರಡನೇ ಬಾರಿಗೆ ಕಾವೇರಿ ನದಿ ಉಕ್ಕೇರಿ ತಗ್ಗು ಪ್ರದೇಶದಲ್ಲಿ ಬೆಳೆ ಮುಳುಗಡೆಯಾಗಿ ರೈತರ ಬದುಕು ಮುರಾಬಟ್ಟೆಯಾಗಿದೆ.

ಹಾರಂಗಿ ಹಾಗೂ ಹೇಮಾವತಿ ಜಲಾಶಯ ಭರ್ತಿಯಾಗಿದ್ದು ನಿತ್ಯ ಹೆಚ್ಚುವರಿಯಾಗಿ ನೀರು ಹರಿಸಿದ್ದರಿಂದ ನದಿ ಉಕ್ಕೇರಲು ಕಾರಣವಾಗಿದೆ. ಪರಿಣಾಮವಾಗಿ ತಗ್ಗು ಪ್ರದೇಶದತ್ತ ನೀರು ನುಗ್ಗಿ ವಾರಗಟ್ಟಲೆ ಪ್ರವಾಹ ಪರಿಸ್ಥಿತಿ ತಲೆದೋರಿದೆ. ಮಳೆ ಅಬ್ಬರಕ್ಕೆ ಸಿಲುಕಿ ತಂಬಾಕು, ಶುಂಠಿ, ದ್ವಿದಳ ಧಾನ್ಯ ಹಾಗೂ ತೋಟದ ಬೆಳೆಗಳು ಹಾನಿಗೊಳಗಾಗಿದ್ದು ರೈತರ ಕೈಗೆ ಬಂದ ತುತ್ತು ಬಾಯಿಗೆ ಬಾರದಂತಾಗಿದೆ. ಕೊಣನೂರು ಹಾಗೂ ರಾಮನಾಥಪುರ ಹೋಬಳಿ ಭಾಗದ ತಗ್ಗು ಪ್ರದೇಶದಲ್ಲಿ ಹೊಗೆಸೊಪ್ಪು ಗಿಡಗಳು ಕಾವೇರಿ ನದಿ ಪ್ರವಾಹಕ್ಕೆ ಸಿಲುಕಿ ಬಲಿಯಾಗಿವೆ.

ಕಳೆದ ಬಾರಿ ತಂಬಾಕಿಗೆ ಮಾರುಕಟ್ಟೆಯಲ್ಲಿ ಉತ್ತಮ ಬೆಲೆ ದೊರೆತ ಖುಷಿಯಲ್ಲಿ ರೈತರು ಈ ಬಾರಿ ಹೆಚ್ಚಿನ ಪ್ರಮಾಣದಲ್ಲಿ ಸಸಿಮಡಿ ಬೆಳೆಸಿ ನಾಟಿ ಮಾಡಿದ್ದರು. ನಾಟಿ ಸಮಯದಲ್ಲಿ ಉತ್ತಮವಾಗಿ ಬಿದ್ದ ಮಳೆ ಬೆಳೆ ಬೆಳವಣಿಗೆ ಕಾಣಬೇಕೆನ್ನುವಷ್ಟರಲ್ಲಿ ಅತಿವೃಷ್ಟಿ ಹೊಡೆತಕ್ಕೆ ಸಿಲುಕಿ ಅಪಾರ ಪ್ರಮಾಣದಲ್ಲಿ ಇಳುವರಿ ಕುಂಠಿತಗೊಂಡಿದೆ. ತಂಬಾಕು ನಾಟಿ ಮಾಡಿದ ಆರಂಭದ ಏಪ್ರಿಲ್ ಮತ್ತು ತಿಂಗಳಿನಲ್ಲಿ ಕೃಷಿ ಇಲಾಖೆ ಮಾಹಿತಿ ಪ್ರಕಾರ 51.4 ಮಿಮೀ ಮತ್ತು 96.1 ಮಿಮೀ ವಾಡಿಕೆ ಮಳೆ ಬದಲಿಗೆ 68.3 ಮಿಮೀ ಹಾಗೂ 256.4 ಮಿಮೀ ಮಳೆಯಾಗಿದೆ. ಮೇ ತಿಂಗಳಲ್ಲಿ ವಾಡಿಕೆಗಿಂತ 167 ಮಿಮೀ ಅಧಿಕ ಮಳೆಯಾಗಿದ್ದರಿಂದ ನಾಟಿ ಮಾಡಿದ ಗಿಡಗಳು ಮೇಲೇಳದಂತಾಗಿದ್ದು ರಸಗೊಬ್ಬರ ನೀಡಿ ಬೆಳೆ ಆರೈಕೆ ಮಾಡದಂತೆ ತೊಡಕಾಗಿ ಬೆಳೆ ಹಾನಿಗೀಡಾಯಿತು.

> ಮಳೆಯಿಂದಾಗಿ ತಂಬಾಕು ಬೆಳೆಗೆ ಹೆಚ್ಚು ಹಾನಿ ಉಂಟಾಗಿದೆ. ಕಾವೇರಿ ನದಿ ವ್ಯಾಪ್ತಿಯ ತಗ್ಗು ಪ್ರದೇಶದಲ್ಲಿ ಬೆಳೆ ಮುಳುಗಿದ್ದು ಇಳುವರಿ ಕುಂಠಿತಗೊಂಡಿದೆ. ಮುಸುಕಿನ ಜೋಳಕ್ಕೆ ಬಿಳಿಸುಳಿ ರೋಗ ಕಾಣಿಸಿಕೊಂಡಿರುವ ಕುರಿತು ಸಮೀಕ್ಷಾ ಕಾರ್ಯ ಕೈಗೆತ್ತಿಕೊಳ್ಳಲಾಗಿದೆ.
>
> **- ಕೆ.ಜಿ. ಕವಿತಾ,**
> **ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕಿ, ಅರಕಲಗೂಡು**

### ತಂಬಾಕು ಬೆಳೆಗಾರರಿಗೆ ಸಂಕಷ್ಟ

ತಾಲ್ಲೂಕಿನ ಕೊಣನೂರು ಮತ್ತು ರಾಮನಾಥಪುರ ಹೋಬಳಿ ಭಾಗದ ರೈತರು ಈ ಸಲ ಹೆಚ್ಚಿನದಾಗಿ ತಂಬಾಕು ಬೆಳೆಯತ್ತ ಒಲವು ತೋರಿದ್ದರು. ಕಳೆದ ವರ್ಷ ಮಾರುಕಟ್ಟೆಯಲ್ಲಿ ಹೊಗೆಸೊಪ್ಪಿಗೆ ಮೇಲ್ದರ್ಜೆ ಮತ್ತು ಕೆಳದರ್ಜೆಗೂ ಉತ್ತಮ ಬೆಲೆ ದೊರೆತ ಖುಷಿಯಲ್ಲಿ ಹೆಚ್ಚಿನ ರೈತರು ಬೆಳೆ ಬೆಳೆದಿದ್ದರು. ಹೀಗಾಗಿ ತಂಬಾಕು ಬೆಳೆ ವಿಸ್ತೀರ್ಣ ಹೆಚ್ಚಿತ್ತು. ಬೆಳೆಗಾಗಿ ನೀರಿನಂತೆ ಹಣ ಖರ್ಚು ಮಾಡಿದ್ದರು. ದುರಾದೃಷ್ಟವಶಾತ್ ಭಾರಿ ಮಳೆಯಿಂದಾಗಿ ಬೆಳೆ ಜಮೀನಿನಲ್ಲಿ ನೀರು ನಿಂತು ಇಳುವರಿ ಕುಂಠಿತಗೊಂಡಿದ್ದು, ರೈತರು ಸಂಕಷ್ಟಕ್ಕೆ ಒಳಗಾಗಿದ್ದಾರೆ.

### ಮುಸುಕಿನ ಜೋಳಕ್ಕೆ ಬಿಳಿಸುಳಿ ರೋಗ

ತಾಲ್ಲೂಕಿನಲ್ಲಿ 19700 ಹೆಕ್ಟೇರ್‌ನಲ್ಲಿ ಮೆಕ್ಕೆಜೋಳ ಗುರಿ ಹೊಂದಲಾಗಿದ್ದು ಈವರೆಗೆ 20500 ಹೆಕ್ಟೇರ್‌ನಲ್ಲಿ ಮುಸುಕಿನ ಜೋಳ ಬೆಳೆಯನ್ನು ಕೈಗೊಳ್ಳಲಾಗಿದೆ. ಬೆಳೆ ಬೆಳವಣಿಗೆ ಸಮಯದಲ್ಲಿ ಬಿಳಿಸುಳಿ ರೋಗಬಾಧೆಗೆ ಸಿಲುಕಿದ್ದರಿಂದ ರೈತರಿಗೆ ಅಪಾರ ನಷ್ಟ ಉಂಟಾಗಿದೆ.

20 ಗ್ರಾಮಗಳಲ್ಲಿ ಸಮೀಕ್ಷೆ : ಮುಸುಕಿನ ಜೋಳ ರೋಗ ಬಾಧೆಗೆ ತುತ್ತಾಗಲು ಕಳಪೆ ಬಿತ್ತನೆ ಬೀಜ ಕಾರಣವಾಗಿದೆ ಎಂದು ರೈತ ಸಂಘದವರು ಪ್ರತಿಭಟನೆ ನಡೆಸಿದ್ದರಿಂದ ಇದೀಗ ಜಿಲ್ಲಾಡಳಿತ ಎಚ್ಚೆತ್ತು ತಹಸೀಲ್ದಾರ್ ಅಧ್ಯಕ್ಷತೆಯಲ್ಲಿ ಕೃಷಿ, ತೋಟಗಾರಿಕೆ, ರೈತ ಪ್ರತಿನಿಧಿಗಳು, ಹೋಬಳಿ ಕೃಷಿ ಅಧಿಕಾರಿಗಳನ್ನು ಒಳಗೊಂಡ ಜಂಟಿ ಸಮೀಕ್ಷಾ ತಂಡ ರಚನೆಯಾಗಿತ್ತು. 5 ಹೋಬಳಿಗಳಲ್ಲಿ ಹೋಬಳಿ ಮಟ್ಟದ ತಂಡಗಳನ್ನು ರಚನೆ ಮಾಡಿದ್ದು ಸಮೀಕ್ಷಾ ಕಾರ್ಯವನ್ನು ಕೈಗೊಳ್ಳಲಾಗಿದೆ. ತಾಲೂಕಿನಾದ್ಯಂತ ಸುಮಾರು 20 ಗ್ರಾಮಗಳ ರೋಗ ಪೀಡಿತ ಬೆಳೆ ತಾಕುಗಳಿಗೆ ಭೇಟಿ ನೀಡಿ ಸಮೀಕ್ಷಾ ಕಾರ್ಯ ಕೈಗೊಳ್ಳಲಾಗಿದೆ. ಅತಿಯಾದ ಮಳೆ ಗಾಳಿಗೆ ಸಿಲುಕಿ ಬೆಳೆ ನೆಲಕಚ್ಚಿದೆ. ಉದ್ದು, ಆಲಸಂದೆ, ತೊಗರಿ 760 ಹೆಕ್ಟೇರ್‌ನಲ್ಲಷ್ಟೆ ಬೆಳೆಯಲಾಗಿತ್ತು. ಕೆಲವು ಕಡೆ ಬಿತ್ತನೆ ಮಾಡಿದ ಆರಂಭಲ್ಲೇ ಮಳೆಯಿಂದಾಗಿ ಬೆಳೆ ಮಣ್ಣುಪಾಲಾಗಿದೆ.

ಭೂಮಿಯಲ್ಲಿ ಕೊಳೆಯುತ್ತಿರುವ ಶುಂಠಿ : ತೋಟಗಾರಿಕೆ ಇಲಾಖೆ ಮಾಹಿತಿ ಪ್ರಕಾರ 2 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಶುಂಠಿ ಬಿತ್ತನೆ ಮಾಡಲಾಗಿತ್ತು. ಮಳೆಯಿಂದಾಗಿ ಸಾಕಷ್ಟು ಕಡೆ ಬೆಳೆ ಕೊಳೆ ರೋಗಕ್ಕೆ ತುತ್ತಾಗಿದೆ. ಶುಂಠಿ ಕಟಾವು ಮಾಡಿದ ರೈತರು ಕೊಳೆ ರೋಗದಿಂದ ಹಾಳಾದ ಫಸಲನ್ನು ಜಮೀನಿನಲ್ಲೇ ಬಿಟ್ಟು ಕೈತೊಳೆದುಕೊಳ್ಳುವ ಪರಿಸ್ಥಿತಿ ಬಂದೊಗಿದೆ.

# ಜಾವಗಲ್‌ನಲ್ಲಿ ಹೋಬಳಿ ಮಟ್ಟದ ಕ್ರೀಡಾಕೂಟ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಜಾವಗಲ್: ಪಟ್ಟಣದ ಜಾವಗಲ್ ಶ್ರೀನಾಥ್ ಕ್ರೀಡಾಂಗಣದಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳ ಹೋಬಳಿ ಮಟ್ಟದ 2025-26ನೇ ಸಾಲಿನ ಕ್ರೀಡಾಕೂಟ ಹಮ್ಮಿಕೊಳ್ಳಲಾಗಿತ್ತು.

ಹೋಬಳಿ ಶಿಕ್ಷಣದ ಸಂಯೋಜಕ ಶಿವಾನಂದ್ ಮಾತನಾಡಿ, ಕ್ರೀಡೆಯು ಮಕ್ಕಳ ದೈಹಿಕ ಹಾಗೂ ಮಾನಸಿಕ ಬೆಳವಣಿಗೆಗೆ ಪೂರಕವಾಗಿದೆ. ಸೋಲು ಗೆಲುವಿಗಿಂತ ಭಾಗವಹಿಸುವಿಕೆ ಮುಖ್ಯ ಎಂದರು.

ಕ್ರೀಡಾಕೂಟಕ್ಕೆ ಚಾಲನೆ ನೀಡಿದ ಅರಸೀಕೆರೆ ತಾಲ್ಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಕೆ.ಎಸ್. ಸದಾನಂದ ಮಾತನಾಡಿ, ಪ್ರಾಥಮಿಕ ಹಂತದಿಂದಲೇ ಕಲಿಕೆಯೊಂದಿಗೆ ಕ್ರೀಡೆಗೂ ಗಮನಹರಿಸಿ ಕ್ರೀಡೆಯಲ್ಲಿ ಸಕ್ರಿಯವಾಗಿ ಭಾಗವಹಿಸುವುದರ ಮೂಲಕ ಉತ್ತಮ ಕ್ರೀಡಾಪಟುವಾಗಿ ಉಜ್ವಲ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಜಾವಗಲ್ ಹೋಬಳಿಯಲ್ಲಿ ಯಾವ ಕಾರ್ಯಕ್ರಮ ಆಯೋಜಿಸಿದರೂ ಸಾರ್ವಜನಿಕರಿಂದ ಕ್ರೀಡಾಭಿಮಾನಿಗಳಿಂದ ಉತ್ತಮ ಬೆಂಬಲ ಹಾಗು ಸಹಕಾರ ದೊರೆಯುತ್ತದೆ ಎಂದರು.

ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ರವಿ ಮಾತನಾಡಿ, ಕ್ರೀಡೆಯು ಮಕ್ಕಳಲ್ಲಿ ಸಹಬಾಳ್ವೆ, ಸಹಕಾರ ಮನೋಭಾವ ಬೆಳೆಸುತ್ತದೆ. ವಿದ್ಯಾರ್ಥಿಗಳು ವ್ಯಾಸಂಗದ ಜೊತೆಗೆ ದೈಹಿಕ ಚಟುವಟಿಕೆಗಳಲ್ಲೂ ತೊಡಗಿಸಿಕೊಳ್ಳಬೇಕೆಂದರು. ತಾಲ್ಲೂಕು ದೈಹಿಕ ಶಿಕ್ಷಣ ಶಿಕ್ಷಣಾಧಿಕಾರಿ ವಸಂತ್ ಕುಮಾರ್ ಮಾತನಾಡಿದರು.

ತಾಲ್ಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ನಿರ್ದೇಶಕ ಯು.ಎನ್. ಅಶೋಕ್, ರಾಜ್ಯ ಸರ್ಕಾರಿ ನೌಕರರ ಸಂಘದ ತಾಲ್ಲೂಕು ಘಟಕದ ಕಾರ್ಯದರ್ಶಿ ಡಿ.ಹೆಚ್. ಕೃಷ್ಣ, ಉಪಾಧ್ಯಕ್ಷ ಕೆ.ಎಂ. ಲೋಕೇಶ್, ತಾಲ್ಲೂಕು ದೈಹಿಕ ಶಿಕ್ಷಕರ ಸಂಘದ ಅಧ್ಯಕ್ಷ ವೀರಭದ್ರಪ್ಪ , ಅರಕೆರೆ ಶಾಲೆ ಮುಖ್ಯ ಶಿಕ್ಷಕ ನಾಗರಾಜು ಮತ್ತಿತರರಿದ್ದರು.

# ಸ್ಥಳವಿಲ್ಲದೆ ಬೀದಿ ಬದಿ ವ್ಯಾಪಾರಿಗಳಿಗೆ ಸಂಕಷ್ಟ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ತಾಲ್ಲೂಕಿನ ಅರೇಹಳ್ಳಿ ಪಟ್ಟಣದಲ್ಲಿ ಬೀದಿ ಬದಿ ವ್ಯಾಪಾರಿಗಳಿಗೆ ತಮ್ಮ ವಾಹನಗಳ ನಿಲ್ಲಿಸಲು ಸೂಕ್ತ ಸ್ಥಳಾವಕಾಶ ಇಲ್ಲದೆ ಪರದಾಡುವಂತಾಗಿದೆ.




ಹತ್ತಾರು ವರ್ಷಗಳಿಂದ ಪಾನಿಪುರಿ, ಗೋಬಿ, ಎಗ್ ರೈಸ್ ಸೇರಿ ಇನ್ನಿತರ ಹಲವು ಬಗೆಯ ಫಾಸ್ಟ್ ಫುಡ್ ತಯಾರಿಸಿ ಜೀವನ ಸಾಗಿಸುತ್ತಿದ್ದ ವ್ಯಾಪಾರಿಗಳಿಗೆ ಈಗ ಸಂಕಷ್ಟ ಎದುರಾಗಿದ್ದು ಸೂಕ್ತ ಸ್ಥಳಾವಕಾಶ ಮಾಡಿಕೊಡಬೇಕೆಂದು ಅವರು ಒತ್ತಾಯಿಸಿದ್ದಾರೆ.

ಪಟ್ಟಣದಲ್ಲಿರುವ ನಾಡ ಕಚೇರಿಗೆ ಹೋಗುವ ದಾರಿಯ ಒಂದು ಬದಿಯಲ್ಲಿ ಗೂಡ್ಸ್ ವಾಹನಗಳು ಇನ್ನೊಂದು ಬದಿಯಲ್ಲಿ ಫಾಸ್ಟ್ ಫುಡ್ ಬೀದಿ ಬದಿ ವ್ಯಾಪಾರಿಗಳ ವಾಹನಗಳು ನಿಲ್ಲಿಸಿಕೊಂಡು ಕಳೆದ ಹತ್ತಾರು ವರ್ಷಗಳಿಂದ ಜೀವನ ಸಾಗಿಸುತ್ತಿದ್ದರು.

ಆದರೆ ಇತ್ತೀಚಿನ ದಿನಗಳಲ್ಲಿ ಪಟ್ಟಣವು ಅಭಿವೃದ್ಧಿಯತ್ತ ಸಾಗುತ್ತಿದ್ದಂತೆ ಆಟೋ ರಿಕ್ಷಾಗಳ ಸಂಖ್ಯೆಯು ಹೆಚ್ಚಾಗಿ ಈಗಿರುವ ಆಟೋ ನಿಲ್ದಾಣವು ಸಾಕಾಗುತ್ತಿಲ್ಲ. ಅಲ್ಲದೆ ಬಸ್ ನಿಲ್ದಾಣದಲ್ಲಿ ಅವಶ್ಯವಿರುವ ಸಾರ್ವಜನಿಕರಿಗೆ ಆಟೋ ಸೇವೆ ಒದಗಿಸಲು ಹತ್ತಿರದಲ್ಲಿ ಆಟೋ ನಿಲ್ದಾಣಕ್ಕೆ ಸ್ಥಳಾವಕಾಶವಿಲ್ಲಾವೆಂದು ಆಟೋ ರಿಕ್ಷಾ ಮಾಲೀಕರು ಹಾಗು ಚಾಲಕರು ಈ ಹಿಂದೆ ಗೂಡ್ಸ್ ವಾಹನ ನಿಲ್ಲಿಸುತ್ತಿದ್ದ ಸ್ಥಳದಲ್ಲಿ ನಿಲ್ಲಿಸಲು ತಯಾರಿ ನಡೆಸಿದ್ದರು. ಆಗ ಅಲ್ಲಿದ್ದ ಗೂಡ್ಸ್ ವಾಹನ ಚಾಲಕರು ಮತ್ತು ಮಾಲೀಕರು ರಸ್ತೆಯ ಇನ್ನೊಂದು ಬದಿಯ ಫಾಸ್ಟ್ ಫುಡ್ ವ್ಯಾಪಾರಿಗಳ ಸ್ಥಳದಲ್ಲಿ ನಿಲ್ಲಿಸಲು ಮುಂದಾಗಿದ್ದಾರೆ. ಅದರಿಂದ ಫಾಸ್ಟ್ ಫುಡ್ ವ್ಯಾಪಾರಿಗಳಿಗೆ ಸ್ಥಳಾವಕಾಶ ದೊರಕದೆ ಪರದಾಡುವ ಸ್ಥಿತಿ ಕಳೆದ ನಾಲ್ಕೈದು ದಿನಗಳಿಂದ ನಿರ್ಮಾಣವಾಗಿದೆ. ವಿಷಯ ಗಂಭೀರ ಸ್ವರೂಪ ಪಡೆಯುತ್ತಿದ್ದಂತೆ ಗ್ರಾಮ ಪಂಚಾಯಿತಿ ಅಧಿಕಾರಿಗಳು ಹಾಗು ಪೊಲೀಸ್ ಇಲಾಖೆಯವರು ಆಟೋ ರಿಕ್ಷಾ ಮತ್ತು ಗೂಡ್ಸ್ ವಾಹನ ಚಾಲಕರಿಗೆ ಹಾಗು ಫಾಸ್ಟ್ ಫುಡ್ ಬೀದಿ ಬದಿ ವ್ಯಾಪಾರಿಗಳಿಗೆ ಶಾಶ್ವತ ಮಾರ್ಗೋಪಾಯ ಕಂಡುಕೊಳ್ಳುವ ತನಕ ಯಥಾಸ್ಥಿತಿ ಕಾಪಾಡುವಂತೆ ಸೂಚನೆ ನೀಡಿದ್ದಾರೆ.

ಅಡಕತ್ತರಿಯಲ್ಲಿ ವ್ಯಾಪಾರಿಗಳು: ಯಥಾಸ್ಥಿತಿ ಕಾಪಾಡುವಂತೆ ಪಂಚಾಯಿತಿ ಹಾಗು ಪೊಲೀಸರು ಹೇಳಿದ್ದರಿಂದ ಬೀದಿ ಬದಿ ಅಡಕತ್ತರಿಯಲ್ಲಿ ಸಿಲುಕಿದ್ದಾರೆ. ದಿನದ ದುಡಿಮೆ ನಂಬಿ ಬದುಕುವವರು ಚಿಂತಾಕ್ರಾಂತರಾಗಿದ್ದಾರೆ. ಅನಿವಾರ್ಯವಾಗಿ ರಸ್ತೆಯ ಕೆಲವು ಸ್ಥಳಗಳಲ್ಲಿ ಅಂಗಡಿಗಳನ್ನು ಹಾಕಿಕೊಂಡಿದ್ದಾರೆ. ವ್ಯವಸ್ಥಿತ ಫುಡ್ ಕೋರ್ಟ್ ನಿರ್ಮಿಸಿಕೊಟ್ಟರೆ ಅನುಕೂಲವಾಗುತ್ತದೆ. ಆದರೆ ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿ ಹಾಗೂ ಜನಪ್ರತಿನಿಧಿಗಳು ಗಮನ ಹರಿಸುತ್ತಿಲ್ಲವೆಂಬುದು ವ್ಯಾಪಾರಿಗಳ ಆರೋಪವಾಗಿದೆ.

# ಕ್ರೀಡಾ ಕನಸಿಗೆ ಉತ್ತೇಜನ ಸಿಗಲಿ: ಸಿ.ಎನ್. ಬಾಲಕೃಷ್ಣ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬಾಗೂರು: ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಕ್ರೀಡೆಗಳಲ್ಲಿ ಸಾಮರ್ಥ್ಯ ಹೊಂದಿರುತ್ತಾರೆಯಾದರೂ ಸೂಕ್ತ ಅವಕಾಶ ಹಾಗು ಸೌಲಭ್ಯ ದೊರೆಯದೆ ಕ್ರೀಡಾ ಉತ್ಸಾಹ ಆರಂಭದಲ್ಲೇ ಕಮರಿ ಹೋಗುತ್ತದೆಂದು ಶಾಸಕ ಸಿ.ಎನ್. ಬಾಲಕೃಷ್ಣ ಹೇಳಿದರು.



ಹೋಬಳಿ ಕೇಂದ್ರದ ಸರ್ಕಾರಿ ಹಿರಿಯ ಪ್ರಾಥಮಿಕ (ಹಳೆಯ) ಶಾಲಾ ಆವರಣದಲ್ಲಿ ತಾಲ್ಲೂಕು ಶಿಕ್ಷಣ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಹೋಬಳಿ ಮಟ್ಟದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳ 2025-26ನೇ ಸಾಲಿನ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿ, ಒಲಿಂಪಿಕ್ಸ್ ಸೇರಿ ವಿಶ್ವ ಮಟ್ಟದ ಕ್ರೀಡೆಗಳಲ್ಲಿ ಅಮೇರಿಕಾ, ಜಪಾನ್, ಚೀನಾ ಸೇರಿ ಕೆಲವು ದೇಶಗಳು ಪ್ರತಿಷ್ಠಿತ ಕ್ರೀಡೆಗಳಲ್ಲಿ ಹೆಚ್ಚಿನ ಪದಕ ಗೆಲ್ಲುತ್ತಿವೆ. ಅದೇ ರೀತಿ ಪದಕದ ಪಟ್ಟಿಯಲ್ಲಿ ಉತ್ತಮ ಸ್ಥಾನ ಪಡೆಯಲು ದೇಶದ ಕ್ರೀಡಾಪಟುಗಳಿಗೆ ಹೆಚ್ಚಿನ ತರಬೇತಿ ಹಾಗು ಪ್ರೋತ್ಸಾಹದ ಅವಶ್ಯಕತೆ ಇದೆ. ಅದಕ್ಕೆ ಸರ್ಕಾರಗಳು ಕ್ರೀಡಾ ಇಲಾಖೆಗೆ ಹೆಚ್ಚಿನ ಅನುದಾನ ನೀಡಬೇಕು ಎಂದು ಒತ್ತಾಯಿಸಿದರು.

ತಾಲ್ಲೂಕಿನ ಸರ್ಕಾರಿ ಶಾಲೆಗಳಲ್ಲಿ ಮಕ್ಕಳಿಗೆ ಗುಣಮಟ್ಟದ ಶಿಕ್ಷಣದ ಜೊತೆಗೆ ಕ್ರೀಡೆಗೂ ಹೆಚ್ಚಿನ ಪ್ರೋತ್ಸಾಹ ನೀಡಲಾಗುತ್ತಿದೆ. ತಾಲ್ಲೂಕಿನಲ್ಲಿ ದೈಹಿಕ ಶಿಕ್ಷಣ ಶಿಕ್ಷಕರ ಕೊರತೆ ಅನೇಕ ವರ್ಷಗಳಿಂದ ಇದ್ದು, ಈ ಬಗ್ಗೆ ಹಲವು ಬಾರಿ ಸರ್ಕಾರಕ್ಕೂ ಮನವಿ ಮಾಡಲಾಗಿದೆ. ವಾಲಿಬಾಲ್, ಖೋ ಖೋ ಸೇರಿ ವಿವಿಧ ಕ್ರೀಡೆಗಳಿಗೆ ಹೆಚ್ಚಿನ ತರಬೇತಿ ನೀಡಲು ಸಾಧ್ಯವಾಗುತ್ತಿಲ್ಲ ಎಂದರು.

ಕ್ರೀಡೆಗಳಲ್ಲಿ ಗೆಲುವು-ಸೋಲು ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ. ಕೇವಲ ಗೆಲುವನ್ನೇ ಮಾನದಂಡವಾಗಿಟ್ಟುಕೊಂಡು ಸ್ಪರ್ಧೆ ಮಾಡಬಾರದು. ಸೋತ ಜಾಗದಲ್ಲೇ ಗೆಲುವನ್ನು ಹುಡುಕಬೇಕು. ಕ್ರೀಡಾಪಟುಗಳು ಆತ್ಮಸ್ಥೈರ್ಯ ಬೆಳೆಸಿಕೊಳ್ಳಬೇಕೆಂದು ಸಲಹೆ ನೀಡಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಹೆಚ್.ಎನ್. ದೀಪ ಮಾತನಾಡಿದರು.

ಹೋಬಳಿ ವ್ಯಾಪ್ತಿಯ ಎಲ್ಲಾ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆಗಳ ಮಕ್ಕಳು ಕ್ರೀಡಾಕೂಟದಲ್ಲಿ ಪಾಲ್ಗೊಂಡಿದ್ದರು. ಕ್ರೀಡಾಕೂಟಕ್ಕೆ ಹಳೆಯ ವಿದ್ಯಾರ್ಥಿಗಳು ಮತ್ತು ಬಾಗೂರು ಯುವಕ ಬಳಗ ಸಹಕಾರ ನೀಡಿತು.

ತಾಲ್ಲೂಕು ಕ್ರೀಡಾಧಿಕಾರಿ ಆನಂದ್, ಎಪಿಎಂಸಿ ಮಾಜಿ ಅಧ್ಯಕ್ಷ ಬಿ.ಹೆಚ್. ಶಿವಣ್ಣ, ಬಾಗೂರು ಗ್ರಾಮ ಪಂಚಾಯಿತಿ ಅಧ್ಯಕ್ಷ ಕೆಂಪೇಗೌಡ, ಉದ್ಯಮಿ ಬೂವನಹಳ್ಳಿ ಯೋಗೇಶ್, ಮರುನಹಳ್ಳಿ ದೇವರಾಜ್, ಓಬಳಾಪುರ ಬಸವರಾಜ್, ರಾಮಚಂದ್ರು, ಶಿವಶಂಕರ ಕುಂಟೆ, ಮನು, ರಘು, ಕಾಂತರಾಜ್, ಹುಲಿಕೆರೆ ಸಂಪತ್ ಕುಮಾರ್ ಬಿಆರ್‌ಪಿ ಶಾಂತರಾಜ್, ಪ್ರೌಢಶಾಲಾ ಮುಖ್ಯ ಶಿಕ್ಷಕಿ ಜ್ಯೋತಿ, ಶಿಕ್ಷಕರಾದ ಲತೀಫ್, ಮಂಜುಳಾ ಹಾಗೂ ಇತರರಿದ್ದರು.

# ಹಾಕಿ ಕ್ರೀಡಾಂಗಣಕ್ಕೆ ಸಂಸದರ ಮನವಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ನವದೆಹಲಿ: ಹಾಸನದಲ್ಲಿ ಹಾಕಿ ಟರ್ಫ್ ಕ್ರೀಡಾಂಗಣ ಸ್ಥಾಪಿಸುವಂತೆ ಸಂಸದ ಶ್ರೇಯಸ್ ಪಟೇಲ್ ಅವರು ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದಾರೆ. ಸೋಮವಾರ ಕ್ರೀಡಾ ಹಾಗೂ ಯುವ ವ್ಯವಹಾರಗಳ ಸಚಿವ ಶ್ರೀ ಮನುಸುಖ್ ಮಾಂಡವಿಯಾ ಅವರನ್ನು ಭೇಟಿಯಾದ ಅವರು, ಖೇಲೋ ಇಂಡಿಯಾ ಯೋಜನೆಯಡಿ 10 ಕೋಟಿ ರೂ. ಅನುದಾನ ಕಲ್ಪಿಸುವಂತೆ ಮನವಿ ಮಾಡಿದರು. ಹಾಸನದಲ್ಲಿ ಕ್ರೀಡಾಂಣಕ್ಕೆ ಅಗತ್ಯ ಭೂಮಿ ಲಭ್ಯವಿದೆ. ಜಿಲ್ಲೆಯ ಹಲವು ಆಟಗಾರರು ರಾಷ್ಟ್ರ ಮಟ್ಟದ ಹಾಗೂ ಏಷ್ಯಾಕಪ್ ಸೇರಿ ಅನೇಕ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಕ್ರೀಡಾ ಸ್ಫೂರ್ತಿ ಮೆರೆದಿದ್ದಾರೆ. ಈ ನಿಟ್ಟಿನಲ್ಲಿ ಸರ್ಕಾರ ಶೀಘ್ರ ಕ್ರಮ ಜರುಗಿಸಬೇಕು ಎಂದು ಕೋರಿದರು.

# ಇತಿಹಾಸದಲ್ಲಿ ಈ ದಿನ

## ಆಗಸ್ಟ್-05

**2019:** ಕೇಂದ್ರ ಸರ್ಕಾರವು ಸಂವಿಧಾನದ ಆರ್ಟಿಕಲ್ 370 ಅನ್ನು ರದ್ದುಗೊಳಿಸುವ ಮೂಲಕ ಜಮ್ಮು ಮತ್ತು ಕಾಶ್ಮೀರದ ವಿಶೇಷ ಸ್ಥಾನಮಾನವನ್ನು ಅಂತ್ಯಗೊಳಿಸಿತು. ಈ ದಿನದ ಬಳಿಕ ಕಾಶ್ಮೀರ ಮತ್ತು ಲಡಾಖ್ ಅನ್ನು ಎರಡು ಪ್ರತ್ಯೇಕ ಕೇಂದ್ರಾಡಳಿತ ಪ್ರದೇಶಗಳಾಗಿ ಘೋಷಿಸಲಾಯಿತು.

**2020:** ಪ್ರಧಾನಿ ನರೇಂದ್ರ ಮೋದಿ ಅಯೋಧ್ಯೆಯಲ್ಲಿ ರಾಮ ಮಂದಿರದ ಶಿಲಾನ್ಯಾಸ ಹಾಗು ಭೂಮಿಪೂಜೆ ನೆರವೇರಿಸಿದರು. ಇದು ಹೈಕೋರ್ಟ್ ಮತ್ತು ಸುಪ್ರೀಂ ಕೋರ್ಟ್ ತೀರ್ಪು ನಂತರ ನಡೆದ ಮಹತ್ವದ ಘಟನೆ.

**1963:** ಅಮೇರಿಕಾ, ಯುಕೆ ಮತ್ತು ಸೋವಿಯತ್ ಯೂನಿಯನ್‌ಗಳು ವಾಯುಮಂಡಲ, ಬಯಲು ಜಲಗಳಲ್ಲಿ ಹಾಗು ಆಕಾಶದಲ್ಲಿ ಪರಮಾಣು ಪರೀಕ್ಷೆಗಳನ್ನು ನಿಷೇಧಿಸುವ ಒಪ್ಪಂದಕ್ಕೆ ಸಹಿ ಹಾಕಿದವು.

**1884:** ಯುಎಸ್ ಆರ್ಮಿಯ ಮೊದಲ ಪೋಸ್ಟ್‌ಮಾಸ್ಟರ್ ಜನರಲ್ ನೇಮಕ, ಪದವಿಯಲ್ಲಿ ಮೊದಲ ಮಹಿಳೆ ಅನ್ನಾ ಲೌಸ್ ನೇಮಕಗೊಂಡರು.

### ಜನನ

**1914:** ಬಿಜು ಪಟ್ನಾಯಕ, ಒಡಿಶಾ ಮಾಜಿ ಮುಖ್ಯಮಂತ್ರಿ, ಸ್ವಾತಂತ್ರ್ಯ ಹೋರಾಟಗಾರ.

**1930:** ನೀಲ್ ಆರ್ಮ್‌ಸ್ಟ್ರಾಂಗ್, ಚಂದ್ರನ ಮೇಲೆ ಹೆಜ್ಜೆ ಇರಿಸಿದ ಮೊದಲ ಮಾನವ.

### ನಿಧನ

**1962:** ಪ್ರಸಿದ್ಧ ಹಾಲಿವುಡ್ ನಟಿ ಮಾರಿಲಿನ್ ಮನ್ರೋರ್ ಅವರ ನಿಗೂಢ ಸಾವು.

# ಹೊಳೆನರಸೀಪುರದಲ್ಲಿ ಮಳಿಗೆ ಬದಲು ಪಾರ್ಟಿ ಹಾಲ್ ಮಾಡಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹೊಳೆನರಸೀಪುರ: ಪಟ್ಟಣದಲ್ಲಿ ಪುರಸಭೆಯಿಂದ ನಿರ್ಮಾಣವಾಗಿರುವ ಮಳಿಗೆಗಳ ಸಂಖ್ಯೆ ಹೆಚ್ಚಾಗಿದ್ದು ಅದರ ಬದಲು ಕಲ್ಯಾಣ ಮಂಟಪ ಅಥವಾ ಪಾರ್ಟಿ ಹಾಲ್ ನಿರ್ಮಿಸಿ ಎಂದು ನಾಮನಿರ್ದೇಶಿತ ಸದಸ್ಯ ಉದಯಕುಮಾರ್ ಸಲಹೆ ನೀಡಿದರು.



ಪುರಸಭೆ ಅಧ್ಯಕ್ಷ ಹೆಚ್.ಕೆ. ಪ್ರಸನ್ನ ಅವರ ಅಧ್ಯಕ್ಷತೆಯಲ್ಲಿ ಸೋಮವಾರ ನಡೆದ ಸಾಮಾನ್ಯ ಸಭೆಯಲ್ಲಿ ಮಾತನಾಡಿದ ಅವರು, ಈಗಾಗಲೇ 70 ಮಳಿಗೆಗಳು ಖಾಲಿ ಉಳಿದಿವೆ. ಪ್ರತಿ ಬಾರಿ ಇ ಹರಾಜು ಕರೆದಾಗಲೂ ವರ್ತಕರಿಂದ ನಕಾರ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ. ಪಟ್ಟಣದಲ್ಲಿ ಮಳಿಗೆಗಳು ಅವಶ್ಯಕ್ಕಿಂತ ಹೆಚ್ಚಿವೆ. ಅನವಶ್ಯಕ ಮಳಿಗೆ ಬದಲು ಕಲ್ಯಾಣ ಮಂಟಪ, ಬ್ಯಾಂಕ್ ನಿರ್ಮಿಸಿ ಎಂದರು.

ಸದಸ್ಯೆ ಸುಧಾ ನಳಿನಿ ಮಾತನಾಡಿ, ಮಹಾತ್ಮ ಗಾಂಧಿ ಬಡಾವಣೆಯಲ್ಲಿ ಅಂಗನವಾಡಿ ನಿರ್ಮಾಣಕ್ಕೆ 60★30 ವಿಸ್ತೀರ್ಣದ ನಿವೇಶನ ನೀಡಬೇಕೆಂದು ಕೋರಿದರು. ಮಧ್ಯ ಪ್ರವೇಶಿಸಿದ ನಾಮನಿರ್ದೇಶಿತ ಸದಸ್ಯ ಉಮೇಶ್, ಅಂಗನವಾಡಿ ಕಟ್ಟಡಕ್ಕೆ ಅಷ್ಟೊಂದು ಜಾಗ ನೀಡಲು ಕಾನೂನಿನಲ್ಲಿ ಅವಕಾಶವಿದೆಯೇ ಎಂಬುದನ್ನು ಪರಿಶೀಲಿಸಿ ಎಂದರು. ಅದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಸುಧಾ ನಳಿನಿ, ಮಕ್ಕಳು ಆಟವಾಡಲು ಅಧಿಕ ಜಾಗ ಬೇಕು. ನಾವೇನು ಹಿಂಬಾಗಿಲಿನಿಂದ ಪುರಸಭೆ ಪ್ರವೇಶಿಸಿಲ್ಲ ಎಂದರು.

ಈ ಹೇಳಿಕೆಯಿಂದ ಆಕ್ರೋಶಗೊಂಡ ನಾಮನಿರ್ದೇಶಿತ ಸದಸ್ಯರಾದ ಉಮೇಶ್ ಹಾಗೂ ಭೈರಶೆಟ್ಟಿ ಅವರು, ನಾವೇನು ಹಿಂಬಾಗಿಲಿನಿಂದ ಬಂದಿಲ್ಲ. ಸರ್ಕಾರವೇ ಅಧಿಕೃತವಾಗಿ ನೇಮಿಸಿದೆ. ನೇಮಕಾತಿ ಆದೇಶದ ವಿರುದ್ಧದ ನಡಾವಳಿ ದಾಖಲಿಸಿಕೊಡಿ ಎಂದು ವಾಗ್ವಾದ ಪ್ರಾರಂಭಿಸಿದರು. ಅಧ್ಯಕ್ಷ ಹೆಚ್.ಕೆ. ಪ್ರಸನ್ನ ಅವರು ಮಧ್ಯ ಪ್ರವೇಶಿಸಿ ಎರಡೂ ಕಡೆಯವರನ್ನು ಸಮಾಧಾನಪಡಿಸಿದರು. ಯುಜಿಡಿ ಸಂಪರ್ಕ ಸಮರ್ಪಕಗೊಳಿಸಲು ಬಳಸುವ ಸಕ್ಕಿಂಗ್, ಜಟ್ಟಿಂಗ್ ಯಂತ್ರ, ಟಿಪ್ಪರ್ ಹಾಗೂ ಟ್ರ್ಯಾಕ್ಟರ್ ದುರಸ್ತಿಗೆ ಹಣ ಬಿಡುಗಡೆ, ಮಹಾಗಣಪತಿ ಮಹೋತ್ಸವಕ್ಕೆ 3 ಲಕ್ಷ ರೂ., ಪುರಸಭೆ ಕೆಳ ಹಂತದ ವಾಣಿಜ್ಯ ಮಳಿಗೆಯನ್ನು ವರ್ತಕರಿಗೆ ನೀಡಿದ್ದ ಅವಧಿ ಮುಗಿದ ಹಿನ್ನೆಲೆಯಲ್ಲಿ ವಾಪಸ್ ಪಡೆಯುವ ವಿಷಯಗಳಿಗೆ ಅನುಮೋದನೆ ಪಡೆಯಲಾಯಿತು.

# ಜನ ಸಂಪರ್ಕ ಸಭೆಗೆ ಸಾರ್ವಜನಿಕರ ನಿರುತ್ಸಾಹ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಸರ್ಕಾರದ ಸೇವೆಗಳು ಜನರಿಗೆ ಮತ್ತಷ್ಟು ಹತ್ತಿರವಾಗಬೇಕೆಂಬ ಧ್ಯೇಯೋದ್ದೇಶದಿಂದ ಆರಂಭಿಸಿರುವ ಜನ ಸಂಪರ್ಕ ಸಭೆಗೆ ಪಟ್ಟಣದಲ್ಲಿ ನೀರಸ ಪ್ರತಿಕ್ರಿಯೆ ವ್ಯಕ್ತವಾಯಿತು.



ತಿಂಗಳಲ್ಲಿ ಎರಡು ದಿನ ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರ್ ಅಧ್ಯಕ್ಷತೆಯಲ್ಲಿ ಜನ ಸಂಪರ್ಕ ಸಭೆ ನಡೆಸುವಂತೆ ಸರ್ಕಾರ ಆದೇಶಿಸಿದೆ. ಆ ಹಿನ್ನಲೆಯಲ್ಲಿ ಶನಿವಾರ ಪಟ್ಟಣದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಸಭೆ ಆಯೋಜಿಸಲಾಗಿತ್ತು. ಆದರೆ ಮೇಲಧಿಕಾರಿಗಳು ಬಾರದೆ ಇದ್ದರಿಂದ ಸಾರ್ವಜನಿಕರು ನಿರಾಸೆಗೊಂಡರು. ಉಪವಿಭಾಗಾಧಿಕಾರಿ ಶ್ರುತಿ ಅವರ ಗೈರು ಹಾಜರಿ ಪರಿಣಾಮ ತಹಶೀಲ್ದಾರ್ ಸುಪ್ರೀತ್ ಅವರ ನೇತೃತ್ವದಲ್ಲಿ ಸಭೆ ಆರಂಭವಾಯಿತು. ಬೆಳಿಗ್ಗೆ 10 ಗಂಟೆಗೆ ಬರುವಂತೆ ಜನರಿಗೆ ತಿಳಿಸಲಾಗಿತ್ತಾದರೂ ಮಧ್ಯಾಹ್ನ 12 ಗಂಟೆಯಾದರೂ ಸಭೆ ಪ್ರಾರಂಭವಾಗಿರಲಿಲ್ಲ.

ಮೊದಲ ಜನ ಸಂಪರ್ಕ ಸಭೆಯಲ್ಲಿ 63 ದೂರುಗಳು ದಾಖಲಾದವು. ಕೆಲವರು ತಲಾ 8-10 ಅರ್ಜಿ ಸಲ್ಲಿಸಿದರು. ಜಮೀನು, ರಸ್ತೆ, ನೀರು, ವಿದ್ಯುತ್, ಕಸ ವಿಲೇವಾರಿಯಂತಹ ಸಮಸ್ಯೆಗಳ ಬಗ್ಗೆ ದೂರುಗಳು ಬಂದವು.

ಆದರೆ ಅಧಿಕಾರಿಗಳು ತಮ್ಮ ವಿರುದ್ಧದ ದೂರುಗಳಿಗೆ ಸರಿಯಾಗಿ ಉತ್ತರ ಕೊಡದೆ ಸಮಜಾಯಿಷಿ ನೀಡಿ ಸಾಗ ಹಾಕಿದರು.

ಅಧಿಕಾರಿಗಳ ನಿರ್ಲಕ್ಷ್ಯದಿಂದ ಜನರಿಗೆ ಪರಿಹಾರ ಸಿಗಲಿಲ್ಲ. ಅಧಿಕಾರಿಗಳ ಸಂಖ್ಯೆ ಹೆಚ್ಚಿದ್ದರೂ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸಲಿಲ್ಲ.

ಕೆಲವರು ತಮ್ಮ ಇಲಾಖೆಯ ತಪ್ಪನ್ನು ಮುಚ್ಚಿಕೊಳ್ಳಲು ಪ್ರಯತ್ನಿಸಿದರು ಎಂದು ಹಾಜರಿದ್ದವರು ಮಾತನಾಡಿಕೊಳ್ಳುತ್ತಿದ್ದರು.

ಈ ಹಿಂದೆ ನಡೆದ ಅನೇಕ ಜನ ಸಂಪರ್ಕ ಸಭೆಗೆ ಹಾಜರಾಗಿ ಮನವಿ ಸಲ್ಲಿಸಿದರೂ ಪರಿಹಾರ ಮಾತ್ರ ಶೂನ್ಯವಾಗಿದೆ. ಹೀಗಾಗಿ ಕೆಲಸ ಕಾರ್ಯ ಬಿಟ್ಟು ಬರುವುದು ವ್ಯರ್ಥ ಎಂದು ಅನೇಕರು ಬರಲಿಲ್ಲ.

ಈ ಸಭೆಗೆ ಸಾರ್ವಜನಿಕರು ಬಾರದೆ ಇರುವುದಕ್ಕೆ ಅಧಿಕಾರಿಗಳ ನಿರ್ಲಕ್ಷ್ಯವೇ ಕಾರಣ ಎಂದು ಪಟ್ಟಣದ ಮುಕುಂದ ಅವರು ಅಭಿಪ್ರಾಯಪಟ್ಟರು.

ಕರವೇ ತಾಲ್ಲೂಕು ಅಧ್ಯಕ್ಷ ರಮೇಶ್ ಮಾತನಾಡಿ, ಮುಂದಿನ ದಿನಗಳಲ್ಲಿ ಇಂತಹ ಸಭೆಗಳು ಯಶಸ್ವಿಯಾಗಬೇಕಾದರೆ ಅಧಿಕಾರಿಗಳು ಜನರ ಸಮಸ್ಯೆಗಳಿಗೆ ತಕ್ಷಣ ಪರಿಹಾರ ಕೊಡಬೇಕು. ಜನರಲ್ಲಿ ವಿಶ್ವಾಸ ಮೂಡಿಸಲು ಭ್ರಷ್ಟಾಚಾರ ರಹಿತ ಆಡಳಿತ ಹಾಗೂ ಶೀಘ್ರ ಪರಿಹಾರ ನೀಡಬೇಕೆಂದು ಒತ್ತಾಯಿಸಿದರು.

# 6 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕಳವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಮನೆಯ ಮಾಲೀಕರು ಇದ್ದಾಗಲೇ ಬೀರುವಿನಲ್ಲಿಟ್ಟಿದ್ದ 6 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕಳುವಾಗಿರುವ ಘಟನೆ ತಾಲ್ಲೂಕಿನ ಯರೇಕೊಪ್ಪಲು ಗ್ರಾಮದಲ್ಲಿ ನಡೆದಿದ್ದು ಸಮಾರಂಭ ನಿಮಿತ್ತ ಬಂದಿದ್ದವರೇ ಕದ್ದಿರುವ ಶಂಕೆ ವ್ಯಕ್ತವಾಗಿದೆ.

ಗ್ರಾಮದ ಶ್ರೀನಿವಾಸ ಎಂಬುವರ ಮನೆಯಲ್ಲಿ ಕಳುವಾಗಿದೆ. ಆ. 1 ರಂದು ಮನೆಯಲ್ಲಿ ಆಯೋಜಿಸಿದ್ದ ಕನ್ನಾಂಬಡಮ್ಮ ಹಬ್ಬಕ್ಕೆ ಸ್ನೇಹಿತರು, ಸಂಬಂಧಿಕರು ಸೇರಿ 25 ರಿಂದ 30 ಜನರು ಭಾಗವಹಿಸಿದ್ದರು.

ಮಧ್ಯಾಹ್ನ 3 ಗಂಟೆಗೆ ಶ್ರೀನಿವಾಸ ಅವರ ಪತ್ನಿ ಇಂದ್ರಾ, ಬೀರು ನೋಡಿದಾಗ ಚಿನ್ನಾಭರಣ ಇಲ್ಲದಿರುವುದು ಗೊತ್ತಾಗಿದೆ.

40 ಗ್ರಾಂ ತೂಕದ ಎರಡು ಎಳೆ ಚಿನ್ನದ ಸರ, 15 ಗ್ರಾಂ ತೂಕದ ಎರಡು ಗುಂಡಿನ ಸರ, 10 ಗ್ರಾಂ ತೂಕದ ಚಿನ್ನದ ಬ್ರಾಸ್ ಲೇಟ್ ಮತ್ತು 5 ಗ್ರಾಂ ತೂಕದ ಎರಡು ಉಂಗುರ ಹಾಗು 7 ಗ್ರಾಂ ತೂಕದ ಚಿನ್ನದ ಓಲೆ ಕಳುವಾಗಿದೆ.

ಕಳುವಾದ ಚಿನ್ನಾಭರಣದ ಒಟ್ಟು ಮೌಲ್ಯ 6.05 ಲಕ್ಷ ರೂ. ಆಗಿದೆ. ಶ್ರವಣಬೆಳಗೊಳ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಇಂದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

ಹಾಸನ : ಹೊಳೆನರಸೀಪುರ ನೋಡಲ್ ಕೇಂದ್ರ ವ್ಯಾಪ್ತಿಯ 66/11 ಕೆ.ವಿ.ವಿ.ವಿ ಕೇಂದ್ರ. ಗಂಗೂರು(ಕಳ್ಳಿಕೊಪ್ಪಲು) ಇಲ್ಲಿ ಎರಡನೇ ತ್ರೈಮಾಸಿಕ ನಿರ್ವಹಣಾ ಕಾರ್ಯವನ್ನು ನಿರ್ವಹಿಸಬೇಕಾಗಿರುವುದರಿಂದ, ಗಂಗೂರು(ಕಳ್ಳಿಕೊಪ್ಪಲು) ವಿ.ವಿ.ಕೇಂದ್ರದ ವ್ಯಾಪ್ತಿಯ ಗ್ರಾಮಗಳಾದ ಗಂಗೂರು, ಅಂಕನಹಳ್ಳಿ, ಸೆರ್ವಗಾರನಕೊಪ್ಪಲು, ಕಳ್ಳಿಕೊಪ್ಪಲು, ಸಂಕನಹಳ್ಳಿ, ಶಿವಪುರ, ಕಟ್ಟಹಳ್ಳಿ, ಅಪ್ಪಗೌಡನಹಳ್ಳಿ, ಚಿಕ್ಕಬ್ಯಾಗತವಳ್ಳಿ, ಪಾಳ್ಯ, ಮಾರಗೌಡನಹಳ್ಳಿ, ಶ್ರೀರಾಮದೇವರಕಟ್ಟೆ ಮತ್ತು ಸುತ್ತಮುತ್ತಲಿನ ಗ್ರಾಮಗಳಲ್ಲಿ ಆ. 05 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248